**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**ಸಿ.ಸಿ.ನಂ. 1053/2018**

| | | |
|---|---|---|
| ಸಾಕ್ಷಿದಾರರ ಹೆಸರು | : | ರವಿಶಂಕರ್ ಬಿ ಎಸ್ |
| ತಂದೆಯ ಹೆಸರು | : | ಬಿ ಎಸ್ ಶ್ರೀಕಂಠಪ್ರಸನ್ನ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಪೊಲೀಸ್ ನಿರೀಕ್ಷಕರು, ಲಕ್ಷ್ಮಿಪುರಂ ಪೊಲೀಸ್ ಠಾಣೆ, ಮೈಸೂರು |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 17.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು ದಿನಾಂಕ 06.05.2017 ರಿಂದ 11.06.2018 ರವರೆಗೆ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 12.10.2018 ರಂದು ಚಾಸಾ–1ರವರಿಂದ ಕಡತ ಪಡೆದು ಪರಿಶೀಲಿಸಿ, ದಿನಾಂಕ 15.11.2017 ರಂದು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಪಡೆದು ಆರೋಪಿಯ ವಿರುದ್ಧ ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ. ಸಾಕ್ಷಿಯು ರಾಯನಿಕಿಕ ವಿಶ್ಲೇಷಣಾ ವರದಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ–6** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ–6(ಎ)** ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎನ್.ಎಂ, ವಕೀಲರಿಂದಃ**

ಆರೋಪಿಯ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳು ಇಲ್ಲದಿದ್ದರೂ ಸುಳ್ಳು ಪ್ರಕರಣಕ್ಕೆ ಪೂರಕವಾಗಿ ಸುಳ್ಳು ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗು, ಈ ಪ್ರಕರಣಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**